ಕರ್ನಾಟಕ ಸರ್ಕಾರ

**ಸಾರ್ವಜನಿಕ ಶಿಕ್ಷಣ ಇಲಾಖೆ ಆಯುಕ್ತರಕಛೇರಿ, ನೃಪತುಂಗರಸ್ತೆ, ಬೆಂಗಳೂರು – 560001**

ಸಂಖ್ಯೆ:ಸಿ4(6),ಶೈ.ಮತ್ತುರಜೆ ಅವಧಿ.ನಿಗ–50 2019–20 ದಿನಾಂಕ: 01.10..2020

–: ಜ್ಞಾಪನ :–

**ವಿಷಯ:** 2020–21ನೇ ಸಾಲಿನ ಶೈಕ್ಷಣಿಕ ವರ್ಷದಲ್ಲಿ ರಾಜ್ಯದ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಿಗೆ ಶೈಕ್ಷಣಿಕ ಅವಧಿಗಳು ಮತ್ತು ರಜಾ ಅವಧಿಗಳನ್ನು ನಿಗದಿಪಡಿಸುವ ಬಗ್ಗೆ

**ಉಲ್ಲೇಖ:** ಈ ಕಛೇರಿಯ ಜ್ಞಾಪನ ಸಮ ಸಂಖ್ಯೆ ದಿನಾಂಕ: 14.02.2020

@ @ @ @ @

2020–21 ಸಾಲಿನ ಶೈಕ್ಷಣಿಕ ವರ್ಷದಲ್ಲಿ ರಾಜ್ಯದ ಎಲ್ಲಾ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಿಗೆ ಶೈಕ್ಷಣಿಕ ಅವಧಿಗಳು ಮತ್ತು ರಜಾ ಅವಧಿಗಳನ್ನು ನಿಗದಿಗೊಳಿಸಿ ಈ ಕಛೇರಿಯಿಂದ ಹೊರಡಿಸಿದ ದಿನಾಂಕ: 14.02.2020ರ ಉಲ್ಲೇಖಿತ ಸುತ್ತೋಲೆಯನ್ನು ರದ್ದುಪಡಿಸಿದೆ. ಅದರಂತೆ ಈ ಸುತ್ತೋಲೆಯಲ್ಲಿ ದಿನಾಂಕ: 03.10.2020 ರಿಂದ 26.10.2020 ರವರೆಗೆ ನಿಗದಿಪಡಿಸಿದ ಮಧ್ಯಂತರ ರಜೆಯನ್ನು ಸಹ ರದ್ದುಪಡಿಸಿದೆ. ಪ್ರಸ್ತುತ ವರ್ಷದ ಶೈಕ್ಷಣಿಕ ಚಟುವಟಿಕೆಗಳ ಕುರಿತು ಇಲಾಖೆಯಿಂದ ವಿವಿಧ ಹಂತಗಳಲ್ಲಿ ಜಾರಿಗೊಳಿಸುವ ಆದೇಶಗಳಂತೆ ಕಾರ್ಯನಿರ್ವಹಿಸುವುದು. ಇದಲ್ಲದೆ ದಿನಾಂಕ: 04.08.2020ರ ಸುತ್ತೋಲೆಯನ್ವಯ ರೂಪಿಸಲಾದ **"ವಿದ್ಯಾಗಮ"** ಕಲಿಕಾ ಕಾರ್ಯಕ್ರಮವನ್ನು ಯಥಾವತ್ತಾಗಿ ಮುಂದಿನ ಆದೇಶದವರೆಗೆ ಅನುಷ್ಠಾನಗೊಳಿಸುವ ಬಗ್ಗೆ ಕ್ರಮ ವಹಿಸಲು ತಿಳಿಸಲಾಗಿದೆ.

"ಮಾನ್ಯ ಆಯುಕ್ತರ ಆದೇಶದ ಮೇರೆಗೆ"

ನಿರ್ದೇಶಕರು [ಪ್ರೌಢ ಶಿಕ್ಷಣ]
**ಸಾರ್ವಜನಿಕ ಶಿಕ್ಷಣ ಇಲಾಖೆ**
**ಬೆಂಗಳೂರು**

ಇವರಿಗೆ:–

1. ರಾಜ್ಯದ ಎಲ್ಲಾ ಉಪನಿರ್ದೇಶಕರು(ಆಡಳಿತ/ಅಭಿವೃದ್ಧಿ) ಸಾರ್ವಜನಿಕ ಶಿಕ್ಷಣ ಇಲಾಖೆ. ಇವರಿಗೆ ಮುಂದಿನ ಕ್ರಮಕ್ಕಾಗಿ.
2. ರಾಜ್ಯದ ಎಲ್ಲಾ ಕ್ಷೇತ್ರಶಿಕ್ಷಣಾಧಿಕಾರಿಗಳು, ಸಾರ್ವಜನಿಕ ಶಿಕ್ಷಣ ಇಲಾಖೆ. ಇವರಿಗೆ ಮುಂದಿನ ಕ್ರಮಕ್ಕಾಗಿ.

**ಪ್ರತಿಯನ್ನು:–**

1. ಮಾನ್ಯ ಘನತೆವೆತ್ತ ರಾಜ್ಯಪಾಲರ ಆಪ್ತ ಕಾರ್ಯದರ್ಶಿ ರವರಿಗೆ.
2. ಮಾನ್ಯ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿಗಳು ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಇಲಾಖೆ ಕೊಠಡಿ ಸಂಖ್ಯೆ262/262ಎ ವಿಧಾನಸೌಧ 2ನೇ ಮಹಡಿ ಬೆಂಗಳೂರು–01ರವರಿಗೆ.
3. ಮಾನ್ಯ ಸರ್ಕಾರದ ಪ್ರದಾನ ಕಾರ್ಯದರ್ಶಿಗಳು ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಇಲಾಖೆ ಬಹುಮಹಡಿ ಕಟ್ಟಡ ಬೆಂಗಳೂರು ರವರಿಗೆ.
4. ರಾಜ್ಯ ಯೋಜನಾ ನಿರ್ದೇಶಕರು ಎಸ್.ಎಸ್.ಎ/ಆರ್.ಎಂ.ಎಸ್.ಎ ನೃಪತುಂಗರಸ್ತೆ ಬೆಂಗಳೂರು ರವರಿಗೆ.
5. ಅಪರ ಆಯುಕ್ತರು ಸಾರ್ವಜನಿಕ ಶಿಕ್ಷಣ ಇಲಾಖೆ ಧಾರವಾಡ/ಕಲಬುರಗಿರವರಿಗೆ ಸೂಕ್ತ ಕ್ರಮಕ್ಕಾಗಿ.
6. ಸಾರ್ವಜನಿಕ ಶಿಕ್ಷಣ ಇಲಾಖೆಯ ಎಲ್ಲಾ ನಿರ್ದೇಶಕರುಗಳಿಗೆ.
7. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತ್ ಮುಖ್ಯಕಾರ್ಯನಿರ್ವಾಹಣಾಧಿಕಾರಿಗಳಿಗೆ.
8. ಸಹನಿರ್ದೇಶಕರು ಮಧ್ಯಾಹ್ನಉಪಹಾರಯೋಜನೆ ಬೆಂಗಳೂರು ರವರಿಗೆ.
9. ಅಧ್ಯಕ್ಷರು ಕರ್ನಾಟಕ ರಾಜ್ಯ ಪ್ರಾಂಶುಪಾಲರ ಮತ್ತು ಪ್ರೌಢಶಾಲಾ ಮುಖ್ಯ ಶಿಕ್ಷಕರ ಸಂಘ